## ಕರ್ನಾಟಕ ಲೋಕಾಯುಕ್ತ

**ನಂ.ಕಂಪ್ಲೇಂಟ್/ಉಪಲೋಕ್/ಬಿಜಿಎಂ/1883/2021**
**ಪಿಓ-ಎ.ಆರ್.ಇ-6**(ಮಂಡನಾಧಿಕಾರಿಗಳ ಶಾಖೆ).

ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:28/03/2022.

6-4-22

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3) ರ ಅನ್ವಯ ಶಿಫಾರಸ್ಸು ವರದಿ**

**ವಿಷಯ:** ಶ್ರೀ. **ಸುನಿಲ ಅಣ್ಣಾಸಾಬ ಬಸ್ತವಾಡೆ ಬಿನ್ ಅಣ್ಣಾಸಾಬ ಬಸ್ತವಾಡೆ, ಗ್ರಾಮ ಲೆಕ್ಕಾಧಿಕಾರಿ, ಹಿರೇಕೋಡಿ ಗ್ರಾಮ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ,** ರವರು ದುರ್ನಡತೆ / ದುರ್ವರ್ತನೆ ತೋರಿದ ಬಗ್ಗೆ.

****

1. ಬೆಳಗಾವಿ ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ) ಇವರು ಸಲ್ಲಿಸಿದ ತನಿಖಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ ಶ್ರೀ. **ಸುನಿಲ ಅಣ್ಣಾಸಾಬ ಬಸ್ತವಾಡೆ ಬಿನ್ ಅಣ್ಣಾಸಾಬ ಬಸ್ತವಾಡೆ, ಗ್ರಾಮ ಲೆಕ್ಕಾಧಿಕಾರಿ, ಹಿರೇಕೋಡಿ ಗ್ರಾಮ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ** (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ). ಶ್ರೀ. **ಸುಭಾಷ ಬಾಳಪ್ಪ ಬಾಳಿಕಾಯಿ, ಹಿರೇಕೋಡಿ ಗ್ರಾಮ, ಚಿಕ್ಕೋಡಿ ತಾಲ್ಲೂಕು, ಬೆಳಗಾವಿ ಜಿಲ್ಲೆ** (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ಎದುರುದಾರರಿಗೆ ಅವರ ಕೆಲಸದ ನಿಮಿತ್ತ ಭೇಟಿಮಾಡಿದಾಗ ಎದುರುದಾರರು ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಕಂಡು ಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 7(2)ರ ಅನ್ವಯ ತನಿಖೆ ಕೈಗೊಂಡಿದೆ.

2. **ಪ್ರಕರಣದ ಸಂಕ್ಷಿಪ್ತ ಸಾರಾಂಶ :-**

i) ದೂರುದಾರರಾದ ಶ್ರೀ. **ಸುಭಾಷ ಬಾಳಪ್ಪ ಬಾಳಿಕಾಯಿ,** ಇವರು ಹಿರೇಕೋಡಿ ಗ್ರಾಮದಲ್ಲಿ ವಾಸವಾಗಿದ್ದು, ಹಿರೇಕೋಡಿ ಗ್ರಾಮದ ರಿ.ಸ.ನಂ.10/2 ಕ್ಷೇತ್ರ 1 ಎಕರೆ 19 ಗುಂಟೆ 8 ಆಣೆ ಜಮೀನನ್ನು ಹೊಂದಿದ್ದು, ಆ ಜಮೀನು ದೂರುದಾರರ ಹೆಸರಿನಲ್ಲಿರುತ್ತದೆ. ಅದರಲ್ಲಿ ಅವರ ಮಗ ಶ್ರೀ. ಮಹೇಂದ್ರ ಜೈನ್‌ರವರ ಹೆಸರು ಸೇರಿಸಲು 8-9 ತಿಂಗಳ ಹಿಂದೆ ಚಿಕ್ಕೋಡಿ

ತಹಶೀಲ್ದಾರ್‌ರವರಿಗೆ ಅರ್ಜಿ ನೀಡಿರುತ್ತಾರೆ. ದಿ: 29/08/2018 ರಂದು ಎದುರುದಾರರು ದೂರುದಾರರಿಗೆ ಫೋನ್ ಮಾಡಿ 1,000/- ರೂ. ಚಲನ್ ತುಂಬಿ ನಿಮ್ಮ ಕೆಲಸ ಮಾಡಿದ್ದೇನೆ ಆಫೀಸಿಗೆ ಬನ್ನಿ ಎಂದು ತಿಳಿಸಿರುತ್ತಾರೆ. ದಿ: 31/08/2018 ರಂದು ದೂರುದಾರರು ಬೆಳಿಗ್ಗೆ 11.15 ಗಂಟೆಗೆ ಎದುರುದಾರರ ಕಛೇರಿಗೆ ಬಂದು ಎದುರುದಾರರನ್ನು ಭೇಟಿಯಾಗಿ ಚಲನ್ ಎಷ್ಟು ಕಟ್ಟಿದ್ದೀರಾ ಆ ಬಗ್ಗೆ ರಶೀದಿ ಕೊಡಿ, ಪೆನ್‌ಷನ್ ಬಂದಕೂಡಲೇ ಕೊಡುತ್ತೇನೆ ಎಂದು ದೂರುದಾರರು ತಿಳಿಸಿದಾಗ, ಎದುರುದಾರರು ದೂರುದಾರರಿಗೆ ರಶೀದಿ ನೀಡಿರುವುದಿಲ್ಲ. ಎದುರುದಾರರು ಸರ್ಕಲ್ ಸಾಹೇಬರಿಗೆ ಫೀ ಕೊಡಬೇಕು ಎಂದು ತಿಳಿಸಿರುತ್ತಾರೆ. ಆಗ ದೂರುದಾರರು ಎಷ್ಟು ಕೊಡಬೇಕು ಎಂದು ಕೇಳಿದಾಗ, ಎದುರುದಾರರು 2,000/- ರೂ. ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ. ಆಗ ಎದುರುದಾರರ ಮತ್ತು ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ದೂರುದಾರರು ಅವರ ಮೊಬೈಲ್‌ನಲ್ಲಿ ಧ್ವನಿ ಮುದ್ರಿಸಿಕೊಂಡಿದ್ದು ಇರುತ್ತದೆ. ದೂರುದಾರರು ಗಣಕಯಂತ್ರದಲ್ಲಿ ಅವರ ಜಮೀನಿನ ಪಹಣಿ ಪತ್ರಿಕೆ ತೆಗೆದು ನೋಡಿದಾಗ, ಅವರ ಮಗನ ಹೆಸರು ದಿ: 25/07/2018 ರಂದು ಸೇರ್ಪಡೆಯಾಗಿರುವುದು ಕಂಡುಬಂದಿರುತ್ತದೆ. ದೂರುದಾರರಿಗೆ ಲಂಚದ ಹಣ ಕೊಡಲು ಇಷ್ಟವಿಲ್ಲದ್ದರಿಂದ, ದೂರುದಾರರು ದಿ: 31/08/2018 ರಂದು ಬೆಳಗಾವಿ ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆಯ ಪೊಲೀಸ್ ಉಪಾಧೀಕ್ಷಕರಿಗೆ ದೂರನ್ನು ಸಲ್ಲಿಸಿದ್ದು, ಸದರಿ ಠಾಣೆಯ ಠಾಣಾಧಿಕಾರಿಗಳು ಅವರ ಠಾಣೆಯ ಗುನ್ನೆ ನಂ.12/2018 ರಲ್ಲಿ ಕಲಂ 7, 13 (1) (ಡಿ) ಸಹಿತ 13(2) ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988 ರಡಿಯಲ್ಲಿ ಎದುರುದಾರರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುತ್ತಾರೆ.

ii) ದಿನಾಂಕ 01/09/2018ರಂದು ತನಿಖಾಧಿಕಾರಿಗಳು ಜಪ್ತಿಪೂರ್ವ ಪಂಚನಾಮೆ ಸಮಯದಲ್ಲಿ ಇಬ್ಬರು ಪಂಚರನ್ನು ಠಾಣೆಗೆ ಕರೆಯಿಸಿ ದೂರುದಾರರನ್ನು ಪರಿಚಯಿಸಿ ದೂರಿನ ಸಂಕ್ಷಿಪ್ತ ಮಾಹಿತಿಯನ್ನು ನೀಡಿದ ನಂತರ ಪಂಚಸಾಕ್ಷಿದಾರರು ಪಂಚರಾಗಿ ಸಹಕರಿಸಲು ಒಪ್ಪಿಕೊಂಡಿರುತ್ತಾರೆ. ಎದುರುದಾರರಿಗೆ ಕೊಡಲು ತಂದಿರುವ ಹಣವನ್ನು ಹಾಜರುಪಡಿಸುವಂತೆ ದೂರುದಾರರಿಗೆ ತನಿಖಾಧಿಕಾರಿಯವರು ತಿಳಿಸಿದ ಮೇರೆಗೆ ದೂರುದಾರರು 500/- ರೂ. ಮುಖಬೆಲೆಯ 3 ನೋಟು, 100/- ರೂ. ಮುಖಬೆಲೆಯ 5 ನೋಟುಗಳನ್ನು(ಒಟ್ಟು 2,000/- ರೂ.ಗಳನ್ನು) ಹಾಜರುಪಡಿಸಿರುತ್ತಾರೆ. ತನಿಖಾಧಿಕಾರಿ ಸೂಚನೆಯಂತೆ ಪಂಚಸಾಕ್ಷಿ-2ರವರು ನೋಟುಗಳ ವಿವರಗಳನ್ನು ಹೇಳಿದಂತೆ ಪಂಚಸಾಕ್ಷಿ-1ರವರು ಹಾಳೆಯಲ್ಲಿ ಮತ್ತು ಸಿಬ್ಬಂದಿ ಪಂಚನಾಮೆಯಲ್ಲಿ ನಮೂದಿಸಿರುತ್ತಾರೆ. ತನಿಖಾಧಿಕಾರಿಯವರು ಸೂಚಿಸಿದಂತೆ ಸಿಬ್ಬಂದಿ ಸದರಿ ನೋಟುಗಳಿಗೆ ಫಿನಾಪ್ತಲಿನ್

ಪುಡಿಯನ್ನು ಲೇಪನ ಮಾಡಿದ ನಂತರ, ಪಂಚಸಾಕ್ಷಿ–2 ರವರು ಪುಡಿಲೇಪಿತ ನೋಟುಗಳನ್ನು ದೂರುದಾರರ ಪ್ಯಾಂಟಿನ ಬಲಗಡೆ ಜೇಬಿನಲ್ಲಿ ಇಟ್ಟಿರುತ್ತಾರೆ. ತನಿಖಾಧಿಕಾರಿಯವರ ಮುಂದೆ ದೂರುದಾರರು ಧ್ವನಿಮುದ್ರಿಸಿಕೊಂಡಿದ್ದ ಮೊಬೈಲ್‌ನ್ನು ಹಾಜರುಪಡಿಸಿದ್ದು, ಆ ಮೊಬೈಲ್‌ನಲ್ಲಿರುವ ಸಂಭಾಷಣೆಯನ್ನು ಎಲ್ಲರಿಗೂ ಕೇಳಿಸಿ, ಆ ಸಂಭಾಷಣೆಯನ್ನು ಪಂಚನಾಮೆಯಲ್ಲಿ ಲಿಪಿಕರಣಗೊಳಿಸಿರುತ್ತಾರೆ. ಸದರಿ ಸಂಭಾಷಣೆಯಿರುವ ಮೊಬೈಲ್‌ನ್ನು ಲ್ಯಾಪ್‌ಟಾಪ್ ಮೂಲಕ ಎರಡು ಡಿ.ವಿ.ಡಿ.ಗಳಿಗೆ ವರ್ಗಾಯಿಸಿ, ಆ ಡಿ.ವಿ.ಡಿ.ಗಳನ್ನು ವಶಕ್ಕೆ ಪಡೆದಿರುತ್ತಾರೆ. ತನಿಖಾಧಿಕಾರಿಯವರು ದೂರುದಾರರಿಗೆ ಒಂದು ಧ್ವನಿಮುದ್ರಕವನ್ನು ನೀಡಿ ಎದುರುದಾರರ ಬಳಿ ಹೋಗುವಾಗ ಚಾಲನಾ ಸ್ಥಿತಿಯಲ್ಲಿಟ್ಟುಕೊಳ್ಳುವಂತೆ ಮತ್ತು ದೂರುದಾರರ ಕೆಲಸದ ಬಗ್ಗೆ ವಿಚಾರಿಸುವಂತೆ, ಆಗ ಎದುರುದಾರರು ಲಂಚದ ಹಣಕ್ಕೆ ಬೇಡಿಕೆ ಇಟ್ಟಲ್ಲಿ ಪುಡಿಲೇಪಿತ ನೋಟುಗಳನ್ನು ನೀಡಬೇಕೆಂದು, ಆ ನೋಟುಗಳನ್ನು ಅವರು ಎಲ್ಲಿ ಇಟ್ಟುಕೊಳ್ಳುತ್ತಾರೆಂದು ಗಮನಿಸಿ, ನಂತರ ದೂರುದಾರರಿಗೆ ಅವರ ತಲೆಯ ಮೇಲಿನ ಟೋಪ್ಪಿಗೆ ತೆಗೆದು ಚಸ್ಮಾ ತೆಗೆದು ಟೋಪ್ಪಿಗೆಯಿಂದ ಒರೆಸುವ ಮೂಲಕ ಸೂಚನೆ ನೀಡಬೇಕೆಂದು ತಿಳಿಸಿ, ನೆರಳುಸಾಕ್ಷಿಗೆ ದೂರುದಾರರ ಜೊತೆ ಹೋಗಿ ಅಲ್ಲಿ ನಡೆಯುವ ವಿದ್ಯಮಾನಗಳನ್ನು ಗಮನಿಸುವಂತೆ ತಿಳಿಸಿರುತ್ತಾರೆ. ಎಲ್ಲಾ ಔಚಿತ್ಯಪೂರ್ವ ನಡವಳಿಕೆಗಳನ್ನು ದೂರುದಾರರು, ನೆರಳು ಸಾಕ್ಷಿ, ಹಾಗೂ ಪಂಚರ ಸಮಕ್ಷಮ ನಿರ್ವಹಿಸಿರುತ್ತಾರೆ.

iii) ದಿನಾಂಕ 01/09/2018ರಂದು ದೂರುದಾರರು, ನೆರಳುಸಾಕ್ಷಿ ಮತ್ತು ಪಂಚಸಾಕ್ಷಿ ಹಾಗೂ ಸಿಬ್ಬಂದಿಗಳೊಂದಿಗೆ ತನಿಖಾಧಿಕಾರಿಗಳು ಎದುರುದಾರರ ಕಚೇರಿ ಬಳಿ ಸುಮಾರು 12.15 ಗಂಟೆಗೆ ಬಂದಿರುತ್ತಾರೆ. ದೂರುದಾರರು ಮತ್ತು ನೆರಳುಸಾಕ್ಷಿಗೆ ಮತ್ತೊಮ್ಮೆ ಸೂಚನೆಗಳನ್ನು ನೆನಪಿಸಿ ಎದುರುದಾರರ ಬಳಿ ಕಳುಹಿಸಿಕೊಟ್ಟಿರುತ್ತಾರೆ. ದೂರುದಾರರು ನೆರಳುಸಾಕ್ಷಿಯೊಂದಿಗೆ ಎದುರುದಾರರ ಕಚೇರಿಗೆ ಹೋಗಿ ನೋಡಲಾಗಿ ಎದುರುದಾರರು ಅವರ ಕುರ್ಚಿಯ ಮೇಲೆ ಕುಳಿತುಕೊಂಡಿದ್ದು, ದೂರುದಾರರನ್ನು ನೋಡಿ ಎದುರುದಾರರು ಕೈಸನ್ನೆ ಮೂಲಕ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು, ಆಗ ದೂರುದಾರರು ಅವರ ಪ್ಯಾಂಟಿನ ಬಲಗಡೆ ಜೇಬಿನಲ್ಲಿದ್ದ ಪುಡಿಲೇಪಿತ ನೋಟುಗಳನ್ನು ನೀಡಿದಾಗ ಎದುರುದಾರರು ಬಲಗೈನಿಂದ ಸ್ವೀಕರಿಸಿ, ಎರಡೂ ಕೈಗಳಿಂದ ಎಣಿಸಿ, ಅವರ ಶರ್ಟಿನ ಎಡಗಡೆ ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ಆಗ ದೂರುದಾರರು ಹಣ ತುಂಬಿದ ಚಲನ್ ನೀಡುವಂತೆ ಕೇಳಿದಾಗ, ಎದುರುದಾರರು ವಾಟ್ಸ್ ಆಪ್ ಮುಖಾಂತರ ಕಳುಹಿಸುವುದಾಗಿ ತಿಳಿಸಿರುತ್ತಾರೆ. ಆಗ ದೂರುದಾರರು ಎದುರುದಾರರ ಕಚೇರಿಯಿಂದ ಹೊರಬಂದು ಅವರ ತಲೆಯ ಮೇಲಿನ ಕ್ಯಾಪ್ ತೆಗೆದು, ಚಸ್ಮಾ

ತೆಗೆದು ಒರೆಸುವ ಮೂಲಕ ಸೂಚನೆ ನೀಡಿರುತ್ತಾರೆ. ಆಗ ತನಿಖಾಧಿಕಾರಿಯವರು ಅವರ ತಂಡದೊಂದಿಗೆ ದೂರುದಾರರ ಬಳಿ ಹೋದಾಗ ಅವರು ತೋರಿಸಿದ ಎದುರುದಾರರಿಗೆ ತನಿಖಾಧಿಕಾರಿಯವರು ಗುರುತಿನ ಚೀಟಿ ತೋರಿಸಿ, ತನಿಖೆಗೆ ಸಹಕರಿಸುವಂತೆ ತಿಳಿಸಿ ವಶಕ್ಕೆ ಪಡೆದಿರುತ್ತಾರೆ. ತನಿಖಾಧಿಕಾರಿಯವರ ಸೂಚನೆ ಮೇರೆಗೆ ಸಿಬ್ಬಂದಿ ಸೋಡಿಯಂ ಕಾರ್ಬೋನೇಟ್ ದ್ರಾವಣವನ್ನು ತಯಾರಿಸಿ, ಎರಡು ಬಟ್ಟಲುಗಳಲ್ಲಿ ದ್ರಾವಣವನ್ನು ಪಡೆದುಕೊಂಡು, ಒಂದು ಬಟ್ಟಲಿನಲ್ಲಿದ್ದ ದ್ರಾವಣದಲ್ಲಿ ಎದುರುದಾರರ ಬಲಗೈ ಬೆರಳುಗಳನ್ನು ಅದ್ದಿಸಿ ತೊಳೆಸಿದಾಗ ಆ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ಇನ್ನೊಂದು ಬಟ್ಟಲಿನಲ್ಲಿದ್ದ ದ್ರಾವಣದಲ್ಲಿ ಎದುರುದಾರರ ಎಡಗೈ ಬೆರಳುಗಳನ್ನು ಅದ್ದಿಸಿ ತೊಳೆಸಿದಾಗ ಆ ದ್ರಾವಣವು ಗುಲಾಬಿ ಬಣ್ಣಕ್ಕೆ ತಿರುಗಿರುತ್ತದೆ. ಆ ದ್ರಾವಣಗಳನ್ನು ತನಿಖಾಧಿಕಾರಿಯವರು ಪ್ರತ್ಯೇಕವಾಗಿ ಬಾಟಲ್‌ಗಳಲ್ಲಿ ವಶಕ್ಕೆ ಪಡೆದಿರುತ್ತಾರೆ. ನಂತರ ತನಿಖಾಧಿಕಾರಿಯವರು ದೂರುದಾರರಿಂದ ಪಡೆದ ಹಣದ ಬಗ್ಗೆ ಎದುರುದಾರರನ್ನು ವಿಚಾರಿಸಿದಾಗ, ಎದುರುದಾರರು ಅವರ ಶರ್ಟಿನ ಜೇಬಿನಲ್ಲಿರುತ್ತದೆ ಅಂತ ತಿಳಿಸಿರುತ್ತಾರೆ. ತನಿಖಾಧಿಕಾರಿಯವರ ಸೂಚನೆ ಮೇರೆಗೆ ಲಂಚದ ಹಣವನ್ನು ಎದುರುದಾರರು ಹಾಜರುಪಡಿಸಿದ್ದು, ನಂತರ ಪಂಚಸಾಕ್ಷಿ-2 ರವರು ನೋಟಿನ ವಿವರಗಳನ್ನು ಪರಿಶೀಲಿಸಲಾಗಿ, ಆ ನೋಟುಗಳ ವಿವರಗಳು ಪ್ರಾಯೋಗಿಕಾ ಪಂಚನಾಮೆಯಲ್ಲಿ ನಮೂದಿಸಿದ ಹಾಳೆಗೆ ಮತ್ತು ಪಂಚನಾಮೆಗೆ ತಾಳೆಯಾದ್ದರಿಂದ ತನಿಖಾಧಿಕಾರಿಯವರು ಆ ಹಣವನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ. ತದನಂತರ ತನಿಖಾಧಿಕಾರಿಯವರು ಎದುರುದಾರರಿಗೆ ಸಮಜಾಯಿಷಿ ಬರೆದುಕೊಡುವಂತೆ ತಿಳಿಸಿದಾಗ, ಎದುರುದಾರರು ಅವರ ಸಮಜಾಯಿಷಿಯಲ್ಲಿ "ನಾನು ಹಿರೇಕೊಡಿ ಗ್ರಾಮದ ಗ್ರಾಮ ಲೆಕ್ಕಾಧಿಕಾರಿ ಸುಭಾಷ್ ಬಾಳಿಕಾಯಿ ಇವರ ತಂದೆ ಹೆಸರು ಕಡಿಮೆ ಮಾಡಿ ಅವರ ಮಗನ ಹೆಸರು ಹಚ್ಚಲು ಹಕ್ಕುಬಿಟ್ಟ ಪತ್ರ ಮಾಡಲು ಚಲನ್ ತುಂಬಲು ಅವರಿಂದ 2,000/- ರೂ.ಗಳನ್ನು ತೆಗೆದುಕೊಂಡಿರುತ್ತೇನೆ. ನನಗೆ ಹಣ ಬೇಡ ಎಂದರೂ ಜಬರ್‌ದಸ್ತಿಯಾಗಿ ನನಗೆ ಕೊಟ್ಟಿರುತ್ತಾರೆ." ಎಂದು ಬರೆದುಕೊಟ್ಟಿರುತ್ತಾರೆ. ದೂರುದಾರರು ಮತ್ತು ನೆರಳುಸಾಕ್ಷಿ ಎದುರುದಾರರು ನೀಡಿದ ಸಮಜಾಯಿಷಿಯನ್ನು ಅಲ್ಲಗಳೆದಿರುತ್ತಾರೆ. ಎದುರುದಾರರು ದೂರುದಾರರಿಗೆ ಫೋನ್‌ಮಾಡಿ ಕೆಲಸಮಾಡಬೇಕಾದರೆ, 3,000/- ರೂ. ಕೊಡಬೇಕು ಎಂದು ಕೇಳಿದ್ದು, ಅಷ್ಟು ಹಣ ಆಗುವುದಿಲ್ಲ ಅಂತ ತಿಳಿಸಿದಾಗ, ಮತ್ತೆ ಎದುರುದಾರರು 2,000/- ರೂ. ಕೊಡುವಂತೆ ಬೇಡಿಕೆ ಇಟ್ಟಿರುತ್ತಾರೆಂದು ತಿಳಿಸಿರುತ್ತಾರೆ. ಆ ಕಾರಣ, ಎದುರುದಾರರು ನೀಡಿದ ಸಮಜಾಯಿಷಿಯು ತೃಪ್ತಿದಾಯಕವಾಗಿರುವುದಿಲ್ಲ. ತನಿಖಾಧಿಕಾರಿಯವರು ಎದುರುದಾರರಿಗೆ ಬದಲಿ

ಶರ್ಟಿನ ವ್ಯವಸ್ಥೆ ಮಾಡಿ ಎದುರುದಾರರು ಧರಿಸಿದ್ದ ಶರ್ಟನ್ನು ಪಡೆದು ಸೋಡಿಯಂ ಕಾರ್ಬೋನೆಟ್ ದ್ರಾವಣವನ್ನು ತಯಾರಿಸಿ, ಲಂಚದ ಹಣವನ್ನು ಇಟ್ಟುಕೊಂಡಿದ್ದ ಜೇಬನ್ನು ದ್ರಾವಣದಲ್ಲಿ ಅದ್ದಿಸಿ ತೊಳೆಸಿದಾಗ ದ್ರಾವಣವು ಗುಲಾಬಿಬಣ್ಣಕ್ಕೆ ತಿರುಗಿರುತ್ತದೆ. ದ್ರಾವಣವನ್ನು ಮತ್ತು ಶರ್ಟನ್ನು ತನಿಖಾಧಿಕಾರಿಯವರು ವಶಕ್ಕೆ ಪಡೆದಿರುತ್ತಾರೆ. ತನಿಖಾಧಿಕಾರಿಯವರ ಸೂಚನೆಯಂತೆ ದೂರುದಾರರು ಟ್ರ್ಯಾಪ್ ಸಮಯದಲ್ಲಿ ಎದುರುದಾರರೊಂದಿಗೆ ಮಾತನಾಡಿರುವ ಸಂಭಾಷಣೆಯನ್ನು ಧ್ವನಿಮುದ್ರಿಸಿಕೊಂಡಿದ್ದ ಧ್ವನಿಮುದ್ರಕವನ್ನು ಹಾಜರುಪಡಿಸಿದ್ದು, ಆ ಸಂಭಾಷಣೆಯನ್ನು ಎಲ್ಲರಿಗೂ ಕೇಳಿಸಿ ಪಂಚನಾಮೆಯಲ್ಲಿ ಲಿಪಿಕರಣಗೊಳಿಸಿ, ಧ್ವನಿಮುದ್ರಕದಲ್ಲಿದ್ದ ಸಂಭಾಷಣೆಯನ್ನು ಲ್ಯಾಪ್‌ಟಾಪ್ ಮೂಲಕ ಎರಡು ಡಿ.ವಿ.ಡಿಗಳಿಗೆ ವರ್ಗಾಯಿಸಿರುತ್ತಾರೆ. ಆ ಡಿ.ವಿ.ಡಿ.ಗಳನ್ನು ತನಿಖಾಧಿಕಾರಿಯವರು ವಶಕ್ಕೆ ಪಡೆದಿರುತ್ತಾರೆ. ತನಿಖಾಧಿಕಾರಿಯವರು ಎದುರುದಾರರ ಮತ್ತು ದೂರುದಾರರ ಮಾದರಿಧ್ವನಿಯನ್ನು ಪಡೆದು ಆ ಧ್ವನಿಯನ್ನು ಪ್ರತ್ಯೇಕ ಡಿ.ವಿ.ಡಿ.ಗಳಿಗೆ ವರ್ಗಾಯಿಸಿ, ಆ ಡಿ.ವಿ.ಡಿ.ಗಳನ್ನು ವಶಕ್ಕೆ ಪಡೆದಿರುತ್ತಾರೆ. ಎಲ್ಲರಿಗೂ ಪ್ರಕರಣದ ವಿದ್ಯಮಾನಗಳನ್ನು ತಿಳಿಸಿ ಎದುರುದಾರರನ್ನು ದಸ್ತಗಿರಿ ಮಾಡಿ ಜಪ್ತಿ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ. ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ಎದುರುದಾರರಿಂದ ತನಿಖಾಧಿಕಾರಿಯು ಸಂಗ್ರಹಿಸಿದ ಮುದ್ದೆಮಾಲುಗಳಲ್ಲಿ ಫಿನಾಪ್ತಲೀನ್ ಅಂಶ ಇರುವುದು ಕಂಡುಬಂದಿರುತ್ತದೆ. ತನಿಖಾಧಿಕಾರಿಯು ಸಾಕ್ಷಿದಾರರ ಹೇಳಿಕೆ, ತನಿಖಾ ದಾಖಲೆಗಳನ್ನು, ತಜ್ಞರ ವರದಿಯನ್ನು ಮತ್ತು ಅಭಿಯೋಜನಾ ಮಂಜೂರಾತಿಯನ್ನು ಪಡೆದು ಎದುರುದಾರರ ವಿರುದ್ಧ ದೋಷಾರೋಪಣ ಪತ್ರವನ್ನು ಸಲ್ಲಿಸಿರುತ್ತಾರೆ.

3. ಎದುರುದಾರರಿಂದ ಪರಿವೀಕ್ಷಣಾ ಟಿಪ್ಪಣಿಗೆ ಸಮಜಾಯಿಷಿ ಕೇಳಲಾಗಿತ್ತು. ಎದುರುದಾರರಿಗೆ ದಿ: 05/10/2021ರಂದು ಪರಿವೀಕ್ಷಣಾ ಟಿಪ್ಪಣಿ ಜಾರಿಯಾದರೂ ಸಹ, ಸಾಕಷ್ಟು ಕಾಲಾವಕಾಶ ನೀಡಿದರೂ ಸಹ, ಯಾವುದೇ ಆಕ್ಷೇಪಣೆಯನ್ನು ಈ ಕಚೇರಿಗೆ ಸಲ್ಲಿಸಿರುವುದಿಲ್ಲವಾದ ಕಾರಣ, ಯಾವುದೇ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಲಾಗಿದೆ. ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ತನಿಖಾಧಿಕಾರಿಯು ಎದುರುದಾರರಿಂದ ವಶಪಡಿಸಿಕೊಂಡ ಮುದ್ದೆಮಾಲುಗಳಲ್ಲಿ ಫಿನಾಪ್ತಲಿನ್ ಅಂಶವಿರುವುದು ಕಂಡುಬಂದಿರುತ್ತದೆ. ಆ ಕಾರಣ ಎದುರುದಾರರ ವಿರುದ್ಧ ಪ್ರಕರಣವನ್ನು ಮುಕ್ತಾಯಗೊಳಿಸಲು ಯಾವುದೇ ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

4. ದೂರು ಅರ್ಜಿ, ಸಾಕ್ಷಿದಾರರ ಹೇಳಿಕೆಗಳು, ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆಗಳು, ರಾಸಾಯನಿಕ ತಜ್ಞರ ಪರೀಕ್ಷಾವರದಿ ಹಾಗೂ ದೋಷಾರೋಪಣ

ಪತ್ರದಲ್ಲಿರುವ ಮಾಹಿತಿಗಳಿಂದ ಎದುರುದಾರರು ನೀಡಿರುವ ಸಮಜಾಯಿಷಿಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಎದುರುದಾರರ ವಿರುದ್ಧ ನಡೆವಳಿಯನ್ನು ಕೈಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

5. ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 2 (12) ರ ಪ್ರಕಾರ ಎದುರುದಾರರು ಸರ್ಕಾರಿ / ಸಾರ್ವಜನಿಕ ನೌಕರರಾಗಿದ್ದು, ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯದಲ್ಲಿ ನಿಷ್ಠೆ ತೋರಿಸದೆ ಭ್ರಷ್ಟಾಚಾರವೆಸಗಿ ಕ.ನಾ.ಸೇ. (ನಡತೆ) ನಿಯಮಗಳು 1966 ನಿಯಮ 3 (1)(i) ರಿಂದ (iii) (ಪ್ರಸ್ತುತ ಕ.ನಾ.ಸೇ. (ನಡತೆ) ನಿಯಮಗಳು 2021 ನಿಯಮ (i) ರಿಂದ (iv)) ರನ್ವಯ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14(ಎ)ರಡಿ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರಡಿ ಪ್ರದತ್ತವಾದ ಅಧಿಕಾರದಡಿ ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

6. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ, ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ, ಬೆಂಗಳೂರು.